ಅವನು, ಕರ್ನಾಟಕ ಭೂಕಂದಾಯ (ತಿದ್ದುಪಡಿ) ಅಧಿನಿಯಮ, 2000ದ ಪ್ರಾರಂಭದ ದಿನಾಂಕದಿಂದ ಐದು ವರ್ಷಗಳೊಳಗೆ ಮತ್ತು ನಿಯಮಿಸಬಹುದಾದಂಥ ನಿಯಮಗಳಿಗೊಳಪಟ್ಟು, 94ಎ ಪ್ರಕರಣದ ಅಡಿಯಲ್ಲಿ ರಚಿತವಾದ ಸಮಿತಿಗೆ ಅಥವಾ ಸಂದರ್ಭಾನುಸಾರ ಹೆಚ್ಚುವರಿ ಶಿಫಾರಸ್ಸುಗಳನ್ನು ಮಾಡಬಹುದು ಮತ್ತು ಅಂಥ ಸಮಿತಿಯು ಶಿಫಾರಸ್ಸನ್ನು ಸ್ವೀಕರಿಸಿದ ಮೇಲೆ ಅಂಥ ವ್ಯಕ್ತಿಗೆ ಭೂಮಿಯನ್ನು ಮಂಜೂರು ಮಾಡಬಹುದು.

ದಿನಾಂಕ 03-08-2005ರ ಚುಕ್ಕೆ ಗುರುತ್ತಿಲ್ಲದ ಪ್ರಶ್ನೋತ್ತರಗಳು.

ಅನುಬಂಧ - V

5753 (6510) ಶ್ರೀ ಚನ್ನಬಸವರಾಜ್ (ಅಪ್ಪಾಜಿ) ಶಂಕರರಾವ್ ನಾಡಗೌಡ(ಮುದ್ದೇಬಿಹಾಳ): ಮಾನ್ಯ ಪೌರಾಡಳಿತ ಹಾಗೂ ಕೆಯುಐಡಿಎಫ್‌ಸಿ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮುದ್ದೇಬಿಹಾಳ ನಗರದಲ್ಲಿ ಕುಡಿಯುವ ನೀರಿನ ತೊಂದರೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಕುಡಿಯುವ ನೀರಿನ ತೊಂದರೆ ನಿವಾರಿಸಲು ಅಂದಾಜು ಪಟ್ಟಿಯನ್ನು ತಯಾರಿಸಲಾಗಿದೆಯೇ;

ಇ) ಹಾಗಿದ್ದಲ್ಲಿ ಈ ಸ್ಥಳದ ಸಾರ್ವಜನಿಕರ ಹಿತದೃಷ್ಟಿಯಿಂದ ಕುಡಿಯುವ ನೀರಿನ ಸಮಸ್ಯೆಯನ್ನು ಯಾವಾಗ ಹೋಗಲಾಡಿಸಲಾಗುವುದು?

ಶ್ರೀ ಎಸ್. ಆರ್. ಮೋರೆ (ಪೌರಾಡಳಿತ ಹಾಗೂ ಕೆಯುಐಡಿಎಫ್‌ಸಿ ಸಚಿವರು) :

ಅ) ಬಂದಿದೆ.

ಆ) ಹೌದು,

ಇ) ಮುದ್ದೇಬಿಹಾಳ ಪಟ್ಟಣಕ್ಕೆ ಶಾಶ್ವತವಾಗಿ ಕುಡಿಯುವ ನೀರಿನ ಸಮಸ್ಯೆಯನ್ನು ನಿವಾರಿಸಲು ಒಂದು ಯೋಜನೆಯನ್ನು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ತಯಾರಿಸಲಾಗುತ್ತಿದೆ. ಸದರಿ ಯೋಜನೆಯ ಅಂದಾಜು ಪಟ್ಟಿ ಸರ್ಕಾರಕ್ಕೆ ಸಲ್ಲಿಸಿದ ನಂತರ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

5754 (6586) ಶ್ರೀ ಚನ್ನಬಸವರಾಜ್ (ಅಪ್ಪಾಜಿ) ಶಂಕರರಾವ್ ನಾಡಗೌಡ (ಮುದ್ದೇಬಿಹಾಳ): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ಜಿಲ್ಲೆಯಲ್ಲಿ ಎಷ್ಟು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿವೆ (ಪದವಿ); ಎಲ್ಲೆಲ್ಲಿ ಇವೆ, ಕಲಾ ವಿಜ್ಞಾನ ಮತ್ತು ವಾಣಿಜ್ಯ ವಿಷಯವಾರು ತಿಳಿಸುವುದು.

ಆ) ಮುದ್ದೇಬಿಹಾಳ ತಾಲ್ಲೂಕಿನ ಕೆಲವು ಪ್ರದೇಶಗಳು ನಾರಾಯಣಪುರ ಜಲಾಶಯ ಮತ್ತು ಆಲಮಟ್ಟಿ ಜಲಾಶಯದಲ್ಲಿ ಮುಳುಗಡೆಯಾಗಿದ್ದು ಈ ಪ್ರದೇಶಗಳು ನಂಜುಂಡಪ್ಪ ವರದಿಯ ಪ್ರಕಾರ ಶೈಕ್ಷಣಿಕವಾಗಿ ಅತ್ಯಂತ ಹಿಂದುಳಿದ ಪ್ರದೇಶವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಮುದ್ದೇಬಿಹಾಳ ತಾಲ್ಲೂಕಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಲ್ಲದಿರುವುದರಿಂದ ಕಾಲೇಜು ವಿದ್ಯಾಭ್ಯಾಸ ಮಾಡಲು ವಿದ್ಯಾರ್ಥಿಗಳಿಗೆ ತುಂಬಾ ತೊಂದರೆಯಾಗುತ್ತಿರುವುದು ಸರ್ಕಾರ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ ಎಂದಿನಿಂದ ಸರ್ಕಾರಿ ಪ್ರಥಮ ದರ್ಜೆ ಕಾಲೇಜನ್ನು ತೆರೆಯಲಾಗುವುದು ಹಾಗೂ ಎಲ್ಲಿ ತೆರೆಯಲಾಗುವುದು?

ಶ್ರೀ ಡಿ. ಮಂಜುನಾಥ (ಉನ್ನತ ಶಿಕ್ಷಣ ಸಚಿವರು) :

ಅ) ಬಿಜಾಪುರ ಜಿಲ್ಲೆಯಲ್ಲಿ 02 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿವೆ, ಗೊಳಸಂಗಿಯಲ್ಲಿ ಕಲೆ ಮತ್ತು ವಾಣಿಜ್ಯ ವಿಷಯಗಳುಳ್ಳ ಕಾಲೇಜು ಇದೆ. ಬಿಜಾಪುರ ನಗರದಲ್ಲಿ ಕಲೆ, ವಾಣಿಜ್ಯ ಮತ್ತು ವಿಜ್ಞಾನ ವಿಷಯಗಳುಳ್ಳ ಕಾಲೇಜು ಇದೆ.

ಆ) ಬಂದಿದೆ.

ಇ) ಮುದ್ದೇಬಿಹಾಳದಲ್ಲಿ ಸರ್ಕಾರದಿಂದಲೇ ಅನುದಾನ ಪಡೆಯು ತ್ತಿರುವ ಖಾಸಗಿ ಅನುದಾನಿತ ಪದವಿ ಕಾಲೇಜು (ಎಂ. ಜೆ. ವಿ. ಸಿ. ಕಾಲೇಜು) ನಡೆಯುತ್ತಿರುವುದರಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದಿಲ್ಲ.

ಈ) ಮುದ್ದೇಬಿಹಾಳದಲ್ಲಿ ಕಲೆ, ವಾಣಿಜ್ಯ ಮತ್ತು ವಿಜ್ಞಾನ ವಿಷಯಗಳುಳ್ಳ ಸರ್ಕಾರದಿಂದಲೇ ಅನುದಾನ ಪಡೆಯುತ್ತಿರುವ ಖಾಸಗಿ ಅನುದಾನಿತ ಕಾಲೇಜಿರುವುದರಿಂದ ಹಾಗೂ ಅಲ್ಲಿಯೂ ವಿದ್ಯಾರ್ಥಿಗಳ ಸಂಖ್ಯೆ ಇರುವುದರಿಂದ ಇಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಅವಶ್ಯಕತೆ ಇರುವುದಿಲ್ಲ.

5755 (6489) ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ವಿವಿಧ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆ ಎಷ್ಟು :

ಆ) ಈ ಹುದ್ದೆಗಳು ಯಾವಾಗಿನಿಂದ ಖಾಲಿ ಇವೆ; (ಸರ್ಕಾರಿ/ಅನುದಾನಿತ ಕಾಲೇಜುವಾರು, ಜಿಲ್ಲಾವಾರು, ಶಿವಮೊಗ್ಗ ಜಿಲ್ಲೆಯ ತಾಲ್ಲೂಕುವಾರು ವಿವರ ನೀಡುವುದು);

ಇ) ಸರ್ಕಾರದ ಆದೇಶ ಸಂಖ್ಯೆ: ಇಡಿ 196 ಯುಪಿಸಿ 2000(ಭಾಗ) ದಿನಾಂಕ:1.3.2001ರನ್ವಯ ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ಹುದ್ದೆಗಳನ್ನು ಭರ್ತಿ ಮಾಡಲು ಸ್ಥಗಿತಗೊಳಿಸಲಾಗಿತ್ತು ಆದರೆ ದಿನಾಂಕ : 22-01-2003ರ ಆದೇಶದನ್ವಯ ಅನುದಾನಿತ ಪದವಿ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ತುಂಬುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತಿತ್ತು. ಈ ಮಧ್ಯೆ ದಿನಾಂಕ: 5.7.2004ರ ಆರ್ಥಿಕ ಮಿತವ್ಯಯ ಜಾರಿಯಲ್ಲಿರುವುದರಿಂದಾಗಿ ಸದರಿ ಹುದ್ದೆಗಳನ್ನು ತುಂಬಲಾಗಿರಲಿಲ್ಲ. ಈ ಹುದ್ದೆಗಳನ್ನು ರದ್ದು ಪಡಿಸುವ/ಅನುದಾನರಹಿತ ಹುದ್ದೆಗಳನ್ನಾಗಿ ಘೋಷಿಸುವ ಉದ್ದೇಶ ಪ್ರಸ್ತುತ ಸರ್ಕಾರದ ಮುಂದೆ ಇರುವುದಿಲ್ಲ.

ಈ) ಇಲ್ಲದಿದ್ದಲ್ಲಿ, ಈ ಹುದ್ದೆಗಳನ್ನು ಯಾವಾಗ ತುಂಬಲಾಗುವುದು?

ಶ್ರೀ ಡಿ. ಮಂಜುನಾಥ (ಉನ್ನತ ಶಿಕ್ಷಣ ಸಚಿವರು) :